## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳಿಗೆ ವರ್ಗಾವಣೆಯಿಂದ ವಿನಾಯಿತಿ ನೀಡುವ ಬಗ್ಗೆ ಸೂಚನೆಗಳು.

**ಓದಲಾಗಿದೆ:**

1. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013 ದಿನಾಂಕ: 07-06-2013
2. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013 ದಿನಾಂಕ: 14-06-2013
3. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 18 ಸೇನೌವ 2014 ದಿನಾಂಕ: 06-02-2014
4. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 17 ಸೇನೌವ 2015 ದಿನಾಂಕ: 27-04-2015
5. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 25 ಸೇನೌವ 2015 ದಿನಾಂಕ: 14-10-2015
6. ಸರ್ಕಾರಿ ಆಧೇಶ ಸಂಖ್ಯೆ: ಸಿಆಸುಇ 2 ಸೇನೌವ 2017 ದಿನಾಂಕ: 27-03-2017
7. ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯು ಅರ್ಜಿ ಸಂಖ್ಯೆ: 4306/2017ರಲ್ಲಿ ದಿನಾಂಕ: 27-07-2017ರಂದು ನೀಡಿದ ಆದೇಶ.

**ಪ್ರಸ್ತಾವನೆ:**

1) ಮೇಲೆ ಓದಲಾದ ಉಲ್ಲೇಖ (1) ರಿಂದ (6)ರವರೆಗಿನ ಸರ್ಕಾರಿ ಆದೇಶಗಳಲ್ಲಿ ಸರ್ಕಾರಿ ನೌಕರರ ವರ್ಗಾವಣೆ ಕುರಿತಂತೆ ವಿಸ್ತೃತ ಮಾರ್ಗಸೂಚಿಗಳನ್ನು ನೀಡಲಾಗಿದೆ. ಮೇಲೆ (1)ರಲ್ಲಿ ಓದಲಾದ ಆದೇಶದ ಕಂಡಿಕೆ **9.ಅ.vi** ರಲ್ಲಿ ಈ ಕೆಳಕಂಡಂತೆ ನಿರ್ದಿಷ್ಟಪಡಿಸಲಾಗಿದೆ:

> *"ಒಂದು ವೇಳೆ ಸರ್ಕಾರಿ ನೌಕರನು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಯಾಗಿದ್ದಲ್ಲಿ ಮಾತ್ರ ಅಂತಹ ನೌಕರನನ್ನು ಆ ಪದಾಧಿಕಾರದ ಅವಧಿ ಮುಗಿಯುವವರೆಗೆ ವರ್ಗಾಯಿಸಬಾರದು. ಒಂದು ವೇಳೆ ಪದಾಧಿಕಾರದ ಅವಧಿ ಮುಗಿದ ನಂತರ 3 ತಿಂಗಳು ಚುನಾವಣೆಗಳು ನಡೆಯದಿದ್ದಲ್ಲಿ ಅಂತಹವರನ್ನು ವರ್ಗಾಯಿಸಬಹುದು. ಒಂದು ವೇಳೆ ಅವನು ಮರುಚುನಾಯಿತನಾದಲ್ಲಿ, ಎರಡನೇ ಅವಧಿಯವರೆಗೆ ಮಾತ್ರ ಆತನನ್ನು ಮುಂದುವರಿಸಬಹುದು."*

2) ಸರ್ಕಾರಿ ನೌಕರರು ವರ್ಗಾವಣೆಯನ್ನು ತಪ್ಪಿಸಿಕೊಳ್ಳಲು ಸಂಘದ ಪದಾಧಿಕಾರದ ಅಧಿಕಾರಾವಧಿ ಪೂರ್ಣಗೊಳ್ಳುವ ಸಮಯಕ್ಕೆ ಸರಿಯಾಗಿ ಸಂಘದ ಚುನಾವಣೆಯಲ್ಲಿ ಮತ್ತೊಮ್ಮೆ ಸ್ಪರ್ಧಿಸಿ, ಪುನಃ 5 ವರ್ಷಗಳ ಕಾಲ ವರ್ಗಾವಣೆಯಿಂದ ವಿನಾಯಿತಿ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಇತ್ತೀಚೆಗೆ ರಾಜ್ಯ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳ ವರ್ಗಾವಣೆಗೆ ಸಂಬಂಧಿಸಿದಂತೆ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಅರ್ಜಿ ಸಂಖ್ಯೆ:4306/2017 ದಾಖಲಾಗಿದ್ದು, ಮಾನ್ಯ ನ್ಯಾಯ ಮಂಡಳಿಯು ಯಾವುದೇ ಸರ್ಕಾರಿ ನೌಕರನ ವರ್ಗಾವಣೆ ಜಾರಿಗೆ ಬರುವ ಮುನ್ನ ವರ್ಗಾವಣೆ ಪ್ರಾಧಿಕಾರವು ವರ್ಗಾವಣೆಗೊಳಪಟ್ಟ ನೌಕರನು ನೌಕರರ ಸಂಘದ ಪದಾಧಿಕಾರಿಯಾಗಿದ್ದಲ್ಲಿ ಅಂತಹ ನೌಕರನು ವರ್ಗಾವಣೆಯನ್ನು ನಿರ್ದಿಷ್ಟ ಪಡಿಸಿದ ಅವಧಿಗೆ ಮುಂದೂಡುವ ಅಗತ್ಯವಿರುವ ಬಗ್ಗೆ ಪರಿಶೀಲಿಸತಕ್ಕದೆಂದು ಸೂಚಿಸಿ ದಿನಾಂಕ: 27.07.2017ರ ತೀರ್ಪಿನಲ್ಲಿ ಈ ಕೆಳಕಂಡಂತೆ ನಿರ್ದೇಶನ ನೀಡಿರುತ್ತದೆ.

> *"Before parting with this case, I would like to emphasize on the Government that this Tribunal is coming across many cases relating to transfer of office bearers where they seek exemption from transfer on the ground that they are Office Bearers of Association. Before effecting transfer of a Government servant the transferring Authority is required to verify whether he is an office bearer and his transfer has to be deferred, so long as such an*

*exemption is available in statute look. In many cases Government servants contest elections when they are just to complete their tenure as Government servant and if they are elected they seek exemption for another term of five years. Such a provision in the Transfer Guidelines has to be reviewed in the interest of public service and suitable amendment requires to be made to the aforesaid provision of transfer guidelines with a view to avoid its misuse.*

*Registry is directed to send a copy of this order to the Chief Secretary to Government for necessary action"*

3) ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯ ಮೇಲ್ಕಂಡ ಆದೇಶದಲ್ಲಿನ ಅಂಶಗಳನ್ನು ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 51 ಸೇನೌವ 2017, ಬೆಂಗಳೂರು**
**ದಿನಾಂಕ:31.05.2019**

4) ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮೇಲೆ (1)ರಲ್ಲಿ ಓದಲಾದ ದಿನಾಂಕ:07.06.2013ರ ಸರ್ಕಾರಿ ಆದೇಶದ ಕಂಡಿಕೆ **9.ಅ.vi**ರ ಬದಲಾಗಿ ಈ ಕೆಳಕಂಡಂತೆ ಪ್ರತಿಸ್ಥಾಪಿಸಲಾಗಿದೆ.

***"ಒಂದು ವೇಳೆ ಸರ್ಕಾರಿ ನೌಕರನು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಯಾಗಿದ್ದಲ್ಲಿ, ಪದಾಧಿಕಾರದ ಒಂದು ಅವಧಿಗೆ ಮಾತ್ರ ಅವರಿಗೆ ವರ್ಗಾವಣೆಯಿಂದ ವಿನಾಯಿತಿ ನೀಡಿ, ಎರಡನೇ ಅವಧಿಗೆ ಅವರು ಮರುಚುನಾಯಿತರಾದಲ್ಲಿ ಅವರನ್ನು ನಿಯಮಾನುಸಾರ ವರ್ಗಾವಣೆ ಮಾಡತಕ್ಕದ್ದು".***

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

Gayathri. M.R
31.05.2019

(ಗಾಯತ್ರಿ ಎಂ.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ
(ಸೇವಾ ನಿಯಮಗಳು-1)

ಇವರಿಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಇವರಿಗೆ – ಇದನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಅದರ 200 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಸೇವಾ ನಿಯಮಗಳು-1, ಕೊಠಡಿ ಸಂಖ್ಯೆ: 31, ವಿಧಾನ ಸೌಧ, ಬೆಂಗಳೂರು ಇವರಿಗೆ ಕಳುಹಿಸಿಕೊಡಲು ಕೋರಿದೆ.

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ)/(ಇ&ಆರ್ಎಸ್-ಎ)/(ಎ&ಇ).
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು.

3...

5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು/ಕಾರ್ಯದರ್ಶಿಯವರು
7. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
8. ಎಲ್ಲಾ ಇಲಾಖಾ ಮುಖ್ಯಸ್ಥರು.
9. ಎಲ್ಲಾ ಪ್ರಾದೇಶಿಕ ಆಯುಕ್ತರು.
10. ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
11. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
12. *ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-9.
14. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
15. *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬಹುಮಹಡಿ ಕಟ್ಟಡ, ಬೆಂಗಳೂರು.
16. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
17. ಎಲ್ಲಾ ಸಚಿವರ /ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು
18. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ್, ಚಾಣಕ್ಯಪುರಿ, ನವದೆಹಲಿ-110 011.
19. ಸಚಿವಾಲಯದ ಎಲ್ಲಾ ಶಾಖೆಗಳು.
20. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
21. ವಾರದ ರಾಜ್ಯಪತ್ರ.
22. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

**(*ಮುಖಪತ್ರದೊಂದಿಗೆ)**